**All India Radio: Bangalore**
**National Bulletin In Kannada**
**10.05.2026 1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**10.05.2026 1.10 p.m.**

**<><><><>**

ಮುಖ್ಯಾಂಶಗಳು

1. ಕೇಂದ್ರ ಸರ್ಕಾರದ ರಾಷ್ಟ್ರೀಯ ನೀತಿಗೆ ಸಾರ್ವಜನಿಕರ ಬೆಂಬಲ; ಪಶ್ಚಿಮ ಬಂಗಾಳ, ಅಸ್ಸಾಂ, ಪುದುಚೇರಿಯಲ್ಲಿ ಬಿಜೆಪಿ ಗೆಲುವು ಸಾಕ್ಷಿ- ಪ್ರಧಾನಿ ನರೇಂದ್ರ ಮೋದಿ
2. ತಮಿಳುನಾಡು ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಟಿವಿಕೆ ಪಕ್ಷದ ಮುಖ್ಯಸ್ಥ ಸಿ.ಜೋಸೆಫ್ ವಿಜಯ್; ಗಣ್ಯರ ಶುಭಾಶಯ
3. ಆರ್ಚರಿ ವಿಶ್ವಕಪ್ ಸ್ಟೇಜ್-೨ ಪಂದ್ಯಾವಳಿ; ಭಾರತೀಯ ಮಹಿಳಾ ರಿಕರ್ವ್ ತಂಡದ ಐತಿಹಾಸಿಕ ಸಾಧನೆ
4. ಐಪಿಎಲ್ ಟಿ-೨೦ ಕ್ರಿಕೆಟ್; ಇಂದು ಚೆನ್ನೈ ಸೂಪರ್ ಕಿಂಗ್ಸ್ - ಲಖ್ನೋ ಸೂಪರ್ ಜೈಂಟ್ಸ್ ಹಾಗೂ ರಾಯಲ್ ಚಾಲೆಂಜರ್ಸ್ ಬೆಂಗಳೂರು - ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿ

<><><><>

ಚುನಾವಣಾ ಫಲಿತಾಂಶಗಳು ತಮ್ಮ ಸರ್ಕಾರದ ರಾಷ್ಟ್ರೀಯ ನೀತಿಗಳಿಗೆ ಸಾರ್ವಜನಿಕ ಬೆಂಬಲವನ್ನು ಪ್ರತಿಬಿಂಬಿಸುತ್ತವೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಬೆಂಗಳೂರಿನಲ್ಲಿಂದು ಬಿಜೆಪಿ ಕಾರ್ಯಕರ್ತರನ್ನು ಉದ್ದೇಶಿಸಿ ಮಾತನಾಡಿದ ಅವರು, ಪಶ್ಚಿಮ ಬಂಗಾಳ, ಅಸ್ಸಾಂ ಮತ್ತು ಪುದುಚೇರಿಯಲ್ಲಿ ಬಿಜೆಪಿ ಗೆಲುವು ತಮ್ಮ ಸರ್ಕಾರ ಜಾರಿಗೆ ತಂದ ರಾಷ್ಟ್ರೀಯ ನೀತಿಗೆ, ಸಾರ್ವಜನಿಕ ಬೆಂಬಲಕ್ಕೆ ಸಾಕ್ಷಿಯಾಗಿದೆ ಎಂದರು. ಚುನಾವಣಾ ಫಲಿತಾಂಶಗಳು, ತಮ್ಮ ಸರ್ಕಾರದ ರಾಷ್ಟ್ರೀಯ ಕಾರ್ಯಕ್ರಮಗಳು ಮತ್ತು ನೀತಿಗಳನ್ನು ಬೆಂಬಲಿಸುವ ಸಾರ್ವಜನಿಕ ಸಂದೇಶಗಳನ್ನು ಸೂಚಿಸುವ ರಾಷ್ಟ್ರದ ಮನಸ್ಥಿತಿಯನ್ನು ಪ್ರತಿಬಿಂಬಿಸುತ್ತವೆ ಎಂದು ಹೇಳಿದರು. ಪಶ್ಚಿಮ ಬಂಗಾಳದಲ್ಲಿ, ಬಿಜೆಪಿ ಪಕ್ಷವು ಕೇವಲ ಮೂರು ಸ್ಥಾನಗಳೊಂದಿಗೆ ಪ್ರಾರಂಭವಾಯಿತು ಮತ್ತು ೧೦ ವರ್ಷಗಳಲ್ಲಿ ಬೃಹತ್ ಜನಾದೇಶದೊಂದಿಗೆ ಸರ್ಕಾರವನ್ನು ರಚಿಸಿದೆ ಎಂದರು. ಅಸ್ಸಾಂನಲ್ಲಿ ಜನತೆ ಪಕ್ಷಕ್ಕೆ ಮೂರನೇ ಅವಧಿಗೆ ಅಧಿಕಾರ

ನೀಡಿದ್ದಾರೆ ಮತ್ತು ಗುಜರಾತ್ ಪುರಸಭೆ ಚುನಾವಣೆಯಲ್ಲಿ, ಪಕ್ಷವು ಹಿಂದಿನ ಎಲ್ಲಾ ದಾಖಲೆಗಳನ್ನು ಮುರಿದಿದೆ ಎಂದು ಹರ್ಷ ವ್ಯಕ್ತಪಡಿಸಿದರು. ಕೇರಳದಲ್ಲಿ, ಈ ಚುನಾವಣೆಯಲ್ಲಿ ಮೂರು ಸ್ಥಾನಗಳನ್ನು ಪಡೆದಿರುವುದು ಮುಂದಿನ ಚುನಾವಣೆಯಲ್ಲಿ ಉತ್ತಮ ಫಲಿತಾಂಶ ಸಾಧಿಸುವಲ್ಲಿ ಮಾರ್ಗಸೂಚಿಯಾಗಲಿದೆ ಎಂದು ಅವರು ಹೇಳಿದರು. ಬಿಜೆಪಿ ಮತ್ತು ಎನ್‌ಡಿಎ ೨೧ ರಾಜ್ಯಗಳಲ್ಲಿ ಆಡಳಿತ ನಡೆಸುತ್ತಿವೆ. ಲೋಕ ಕಲ್ಯಾಣ ಮತ್ತು ದೇಶದ ಸಮೃದ್ಧಿಗಾಗಿ ಕೆಲಸ ಮಾಡುತ್ತಿವೆ ಎಂದರು. ಈ ವೇಳೆ, ಕಾಂಗ್ರೆಸ್ ಪಕ್ಷವನ್ನು ಟೀಕಿಸಿದ ಪ್ರಧಾನಿ, ಚುನಾವಣಾ ವೈಫಲ್ಯಗಳಿಗೆ ಎಲ್ಲವನ್ನೂ ದೂಷಿಸುವುದು ಅವರ ನಾಯಕರಲ್ಲಿ ಅಭ್ಯಾಸವಾಗಿದೆ ಎಂದು ಹೇಳಿದರು. ಸಂಸತ್ತಿನಲ್ಲಿ ಮಹಿಳೆಯರಿಗೆ ಶೇಕಡಾ ೩೩ ರಷ್ಟು ಮೀಸಲಾತಿಯನ್ನು ಖಾತ್ರಿಪಡಿಸಿದ 'ನಾರಿ ಶಕ್ತಿ ವಂದನ್ ಅಧಿನಿಯಮ' ವಿರುದ್ಧ ಮತ ಚಲಾಯಿಸುವ ಮೂಲಕ ಕಾಂಗ್ರೆಸ್ ಮಹಿಳೆಯರಿಗೆ ದ್ರೋಹವೆಸಗಿದೆ ಎಂದು ಆರೋಪಿಸಿದರು. ರಾಷ್ಟ್ರೀಯ ಅಭಿವೃದ್ಧಿಗಾಗಿ ಕೆಲಸ ಮಾಡಲು ಮತ್ತು ಅಮೆರಿಕ-ಇರಾನ್ ಯುದ್ಧದಂತಹ ಭೌಗೋಳಿಕ ರಾಜಕೀಯ ಬೆಳವಣಿಗೆಗಳಿಂದ ಉಂಟಾಗುವ ಸವಾಲುಗಳನ್ನು ನಿವಾರಿಸಲು ಒಗ್ಗಟ್ಟಿನಿಂದ ಇರಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಜನತೆಯಲ್ಲಿ ಮನವಿ ಮಾಡಿದರು. ನಂತರ ಬೆಂಗಳೂರಿನಲ್ಲಿ ನಡೆದ ಆರ್ಟ್ ಆಫ್ ಲಿವಿಂಗ್ ನ ೪೫ನೇ ವಾರ್ಷಿಕೋತ್ಸವದಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಿದ್ದರು. ಆರ್ಟ್ ಆಫ್ ಲಿವಿಂಗ್ ಅಂತಾರಾಷ್ಟ್ರೀಯ ಕೇಂದ್ರದಲ್ಲಿ ನೂತನವಾಗಿ ನಿರ್ಮಿಸಲಾದ ಧ್ಯಾನ ಮಂದಿರವನ್ನು ಅವರು ಉದ್ಘಾಟಿಸಿದರು. ಇಂದು ಮಧ್ಯಾಹ್ನ ಪ್ರಧಾನಿ ಹೈದರಾಬಾದ್‌ನಲ್ಲಿ ಸುಮಾರು ಒಂಬತ್ತು ಸಾವಿರದ ೪೦೦ ಕೋಟಿ ರೂಪಾಯಿ ಮೌಲ್ಯದ ಬಹು ಅಭಿವೃದ್ಧಿ ಯೋಜನೆಗಳಿಗೆ ಶಂಕುಸ್ಥಾಪನೆ ಮತ್ತು ಉದ್ಘಾಟನೆ ನೆರವೇರಿಸಲಿದ್ದಾರೆ. ಹೈದರಾಬಾದ್-ಪಣಜಿ ಆರ್ಥಿಕ ಕಾರಿಡಾರ್‌ನಲ್ಲಿ ಗುಡೇಬೆಳ್ಳೂರಿನಿಂದ ಮೆಹಬೂಬ್‌ನಗರದವರೆಗಿನ ರಾಷ್ಟ್ರೀಯ ಹೆದ್ದಾರಿ-೧೬೭ ರ ಚತುಷ್ಪಥಕ್ಕೆ ಪ್ರಧಾನಿ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ, ಇದರ ಒಟ್ಟು ಯೋಜನಾ ವೆಚ್ಚ ಮೂರು ಸಾವಿರದ ೧೭೫ ಕೋಟಿ ರೂಪಾಯಿಯಾಗಿದೆ. ಪ್ರಧಾನಿಯವರು ವಾರಂಗಲ್‌ನಲ್ಲಿ ಪಿಎಂ ಮಿತ್ರಾ ಪಾರ್ಕ್ ಅನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ಇದನ್ನು ಕಾಕತೀಯ ಮೆಗಾ ಜವಳಿ ಪಾರ್ಕ್ ಎಂದೂ ಕರೆಯುತ್ತಾರೆ, ಇದನ್ನು ಪಿಎಂ ಮಿತ್ರಾ ಯೋಜನೆಯಡಿ ಅಭಿವೃದ್ಧಿಪಡಿಸಲಾಗಿದೆ. ನಂತರ ಭಾರತದ ಆರೋಗ್ಯ ಮೂಲಸೌಕರ್ಯಕ್ಕೆ ಪ್ರಮುಖ ಮೈಲಿಗಲ್ಲಾಗಿ, ಹೈದರಾಬಾದ್‌ನಲ್ಲಿ ಅತ್ಯಾಧುನಿಕ, ಕ್ಯಾನ್ಸರ್-ಕೇಂದ್ರಿತ ಮಲ್ಟಿ-ಸೂಪರ್ ಸ್ಪೆಷಾಲಿಟಿ ಕ್ವಾಟರ್ನರಿ ಕೇರ್ ಲಾಭರಹಿತ

ಸಂಸ್ಥೆಯಾದ ದೇಶದ ಸಿಂಧು ಆಸ್ಪತ್ರೆಯನ್ನು ಪ್ರಧಾನಿ ನರೇಂದ್ರ ಮೋದಿ ಲೋಕಾರ್ಪಣೆ ಮಾಡಲಿದ್ದಾರೆ.

<><><>

ಟಿವಿಕೆ ಪಕ್ಷದ ಮುಖ್ಯಸ್ಥ ಸಿ.ಜೋಸೆಫ್ ವಿಜಯ್ ಅವರು ಇಂದು ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದರು. ಬೆಳಿಗ್ಗೆ ಚೆನ್ನೈನ ನೆಹರೂ ಒಳಾಂಗಣ ಕ್ರೀಡಾಂಗಣದಲ್ಲಿ ನಡೆದ ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರ್ಲೇಕರ್ ಅವರು, ವಿಜಯ್ ಅವರಿಗೆ ಅಧಿಕಾರ ಮತ್ತು ಗೌಪ್ಯತೆಯ ಪ್ರಮಾಣವಚನ ಬೋಧಿಸಿದರು. ಅವರೊಂದಿಗೆ ೯ ಸಚಿವರು ಸಹ ಪ್ರಮಾಣವಚನ ಸ್ವೀಕರಿಸಿದರು. ಕ್ಯಾಬಿನೆಟ್ ಸಚಿವರಾಗಿ ಪ್ರಮಾಣವಚನ ಸ್ವೀಕರಿಸಿದವರಲ್ಲಿ ಕೆ.ಜಿ. ಅರುಣ್‌ರಾಜ್, ಆಧವ್ ಅರ್ಜುನ, ಎನ್. ಆನಂದ್, ಸೆಲ್ವಿ ಎಸ್ ಕೀರ್ತನಾ ಮತ್ತು ಡಾ. ಟಿ.ಕೆ. ಪ್ರಭು ಸೇರಿದ್ದಾರೆ. ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮತ್ತು ತಮಿಳು ಚಲನಚಿತ್ರೋದ್ಯಮದ ಹಲವರು ಉಪಸ್ಥಿತರಿದ್ದರು.  ವಿಜಯ್, ಕಾಂಗ್ರೆಸ್, ಸಿಪಿಐ, ಸಿಪಿಐಎಂ, ವಿಸಿಕೆ ಮತ್ತು ಐಯುಎಂಎಲ್ ಬೆಂಬಲದೊಂದಿಗೆ, ೨೩೪ ಸದಸ್ಯರ ವಿಧಾನಸಭೆಯಲ್ಲಿ ೧೨೦ ಚುನಾಯಿತ ಶಾಸಕರ ಬೆಂಬಲವನ್ನು ಪಡೆದರು. ೧೯೬೭ ರಿಂದ ಡಿಎಂಕೆ ಅಥವಾ ಎಐಎಡಿಎಂಕೆಯಿಂದ ಬಂದವರಲ್ಲದ ರಾಜ್ಯದ ಮೊದಲ ಮುಖ್ಯಮಂತ್ರಿಯಾಗಿ ಅವರು ಇತಿಹಾಸ ನಿರ್ಮಿಸಿದರು. ಲೋಕ ಭವನದ ಪ್ರಕಟಣೆಯ ಪ್ರಕಾರ, ರಾಜ್ಯಪಾಲರು ವಿಜಯ್ ಅವರಿಗೆ ಇದೇ ೧೩ ಅಥವಾ ಅದಕ್ಕೂ ಮೊದಲು ವಿಧಾನಸಭೆಯಲ್ಲಿ ವಿಶ್ವಾಸ ಮತ ಯಾಚಿಸುವಂತೆ ನಿರ್ದೇಶಿಸಿದ್ದಾರೆ.

<><><>

ತಮಿಳುನಾಡಿನ ಮುಖ್ಯಮಂತ್ರಿಯಾಗಿ ಇಂದು ಪ್ರಮಾಣ ವಚನ ಸ್ವೀಕರಿಸಿದ ಸಿ.ಜೋಸೆಫ್ ವಿಜಯ್ ಅವರನ್ನು ಪ್ರಧಾನಿ ನರೇಂದ್ರ ಮೋದಿ ಅಭಿನಂದಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ, ವಿಜಯ್ ಅವರ ಮುಂದಿನ ಅಧಿಕಾರಾವಧಿಗೆ ಶುಭಾಶಯ ತಿಳಿಸಿದ್ದು, ಜನರ ಜೀವನವನ್ನು ಸುಧಾರಿಸಲು ಕೇಂದ್ರ ಸರ್ಕಾರ, ತಮಿಳುನಾಡು ಸರ್ಕಾರದೊಂದಿಗೆ ಕೆಲಸ ಮಾಡುವುದನ್ನು ಮುಂದುವರಿಸುತ್ತದೆ ಎಂದು ತಿಳಿಸಿದ್ದಾರೆ. ಶ್ರೀಲಂಕಾ ಅಧ್ಯಕ್ಷ ಅನುರ ಕುಮಾರ ದಿಸಾನಾಯಕೆ ಟಿವಿಕೆ ಮುಖ್ಯಸ್ಥ ಸಿ.ಜೋಸೆಫ್ ವಿಜಯ್ ಅವರನ್ನು ಅಭಿನಂದಿಸಿದ್ದಾರೆ. ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಅವರು, ಶ್ರೀಲಂಕಾ ಮತ್ತು ತಮಿಳುನಾಡು ಇತಿಹಾಸ,

ಸಂಸ್ಕೃತಿ, ಉದ್ಯಮಶೀಲತೆ ಮತ್ತು ತಲೆಮಾರುಗಳಾದ್ಯಂತ ಶಾಶ್ವತವಾದ ಜನರ ಸಂಬಂಧಗಳ ಮೂಲಕ ಸಂಪರ್ಕ ಹೊಂದಿವೆ ಎಂದು ಹೇಳಿದ್ದಾರೆ.

<><><>

ಗುಜರಾತ್‌ನ ಪ್ರಸಿದ್ಧ ಸೋಮನಾಥ ದೇವಾಲಯವು, ಜಾಗತಿಕ ಆಧ್ಯಾತ್ಮಿಕ ಮತ್ತು ಸುಸ್ಥಿರ ಪ್ರವಾಸೋದ್ಯಮ ಕೇಂದ್ರವಾಗಿ ವಿಕಸನಗೊಳ್ಳುತ್ತಿರುವ ತನ್ನ ಆಧುನಿಕ ಪ್ರಯಾಣದ ಎಪ್ಪತ್ತೈದು ವರ್ಷಗಳನ್ನು ಆಚರಿಸುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಅವರು 'ಸೋಮನಾಥ ಅಮೃತಪರ್ವ'ವನ್ನು ಆಚರಿಸಲು ಸಜ್ಜಾಗಿರುವುದರಿಂದ, ಸೋಮನಾಥ ಟ್ರಸ್ಟ್‌ನ ಅಧ್ಯಕ್ಷರಾಗಿ ಅವರ ನೇತೃತ್ವದಲ್ಲಿ ದೇವಾಲಯವು 'ಸುವರ್ಣ ಯುಗ'ವನ್ನು ಆಚರಿಸುತ್ತಿದೆ. ಅದರ ಧಾರ್ಮಿಕ ಮಹತ್ವವನ್ನು ಮೀರಿ, ಸೋಮನಾಥ ಪರಿಸರ ಸಂರಕ್ಷಣೆಯಲ್ಲಿ ಪ್ರವರ್ತಕನಾಗಿ ಹೊರಹೊಮ್ಮುತ್ತಿದೆ, ಭಾರತದ ಮೊದಲ 'ನಿವ್ವಳ-ಶೂನ್ಯ' ದೇವಾಲಯವಾಗುವ ಗುರಿಯನ್ನು ಹೊಂದಿದೆ. "ಮಿಷನ್ ಲೈಫ್' ಉಪಕ್ರಮದಡಿಯಲ್ಲಿ, ದೇವಾಲಯವು ಹೂವಿನ ತ್ಯಾಜ್ಯವನ್ನು ಗೊಬ್ಬರವಾಗಿ ಮತ್ತು ಪ್ಲಾಸ್ಟಿಕ್ ತ್ಯಾಜ್ಯವನ್ನು ಪೇವರ್ ಬ್ಲಾಕ್‌ಗಳಾಗಿ ಪರಿವರ್ತಿಸುವ ಮೂಲಕ ಸುಸ್ಥಿರತೆಯಲ್ಲಿ ಮಾನದಂಡಗಳನ್ನು ಸ್ಥಾಪಿಸುತ್ತಿದೆ. ಇದಲ್ಲದೆ, ಸುಧಾರಿತ ಒಳಚರಂಡಿ ಸಂಸ್ಕರಣಾ ಘಟಕಗಳು, ಮಳೆನೀರು ಕೊಯ್ಲು ವ್ಯವಸ್ಥೆ ಮತ್ತು ಮಿಯಾವಾಕಿ ಕಾಡುಗಳೊಂದಿಗೆ, ಟ್ರಸ್ಟ್ 'ನೆಟ್-ಝೀರೋ' ಇಂಗಾಲದ ಹೆಜ್ಜೆಗುರುತನ್ನು ವೇಗವಾಗಿ ಸಾಧಿಸುತ್ತಿದೆ.

<><><>

ಶಾಂಘೈನಲ್ಲಿ ನಡೆಯುತ್ತಿರುವ ಆರ್ಚರಿ ವಿಶ್ವಕಪ್ ಸ್ಟೇಜ್-೨ ಪಂದ್ಯಾವಳಿಯಲ್ಲಿ ಭಾರತೀಯ ಮಹಿಳಾ ರಿಕರ್ವ್ ತಂಡವು, ಐತಿಹಾಸಿಕ ಸಾಧನೆ ಮಾಡಿದೆ. ದೀಪಿಕಾ ಕುಮಾರಿ, ಅಂಕಿತಾ ಭಕತ್ ಮತ್ತು ಕುಂಕುಮ್ ಮೊಹೋಡ್ ಅವರನ್ನು ಒಳಗೊಂಡ ಭಾರತೀಯ ತಂಡವು, ಆತಿಥೇಯ ಚೀನಾವನ್ನು ರೋಚಕ ಶೂಟ್‌ಆಫ್‌ನಲ್ಲಿ ಮಣಿಸಿ ಚಿನ್ನದ ಪದಕವನ್ನು ತನ್ನದಾಗಿಸಿಕೊಂಡಿದೆ. ಇದಕ್ಕೂ ಮುನ್ನ ನಡೆದ ಸೆಮಿಫೈನಲ್‌ನಲ್ಲಿ ಭಾರತವು ೧೦ ಬಾರಿ ಒಲಿಂಪಿಕ್ ಚಾಂಪಿಯನ್ ಆಗಿರುವ ದಕ್ಷಿಣ ಕೊರಿಯಾವನ್ನು ಅಚ್ಚರಿಯ ರೀತಿಯಲ್ಲಿ ಸೋಲಿಸಿತು. ಈ ಟೂರ್ನಿಯಲ್ಲಿ ಭಾರತಕ್ಕೆ ಇದು ಎರಡನೇ ಪದಕವಾಗಿದೆ. ನಿನ್ನೆ ಕಾಂಪೌಂಡ್ ವಿಭಾಗದಲ್ಲಿ ಪ್ರವೀಣ್ ಜಾಧವ್ ವೈಯಕ್ತಿಕ ವಿಭಾಗದಲ್ಲಿ ಕಂಚಿನ ಪದಕ ಗೆದ್ದು ಭಾರತದ ಪದಕ ಖಾತೆ ತೆರೆದಿದ್ದರು.

<><><>

ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯಲ್ಲಿಂದು ಎರಡು ಪಂದ್ಯಗಳು ನಡೆಯಲಿವೆ. ಚೆನ್ನೈನ ಎಂ.ಎ.ಚಿದಂಬರಂ ಕ್ರೀಡಾಂಗಣದಲ್ಲಿ ನಡೆಯಲಿರುವ ದಿನದ ಮೊದಲ ಪಂದ್ಯದಲ್ಲಿ ಚೆನ್ನೈ ಸೂಪರ್

ಕಿಂಗ್ಸ್ ಹಾಗೂ ಲಖ್ನೋ ಸೂಪರ್ ಜೈಂಟ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩.೩೦ ಕ್ಕೆ ಆರಂಭವಾಗಲಿದೆ. ರಾಯ್‌ಪುರದ ಶಹೀದ್ ವೀರ್ ನಾರಾಯಣ ಸಿಂಗ್ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ರಾತ್ರಿ ೭.೩೦ ಕ್ಕೆ ಪ್ರಾರಂಭವಾಗಲಿರುವ ದಿನದ ಎರಡನೇ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಮತ್ತು ಮುಂಬೈ ಇಂಡಿಯನ್ಸ್ ತಂಡಗಳು ಸೆಣಸಲಿವೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>